



ಅರುಣ ಪಿ. ಭಟ್ಟ

## ವಾರಭವಿಷ್ಯ: 12.09.2024ರಿಂದ 18.09.2024ರವರೆಗೆ




ಕುಟುಂಬದ ಬಗ್ಗೆ ಹೆಮ್ಮೆಪಡುವಂಥ ಬೆಳವಣಿಗೆ ಆಗುತ್ತದೆ. ವಾರದ ಶುರುವಿನಿಂದಲೇ ಉತ್ಸಾಹದಿಂದ ಕಾಣಿಸಿಕೊಳ್ಳುತ್ತೀರಿ. ನಿಮ್ಮ ವೈಯಕ್ತಿಕ ಶ್ರಮದಿಂದ ಹೆಚ್ಚಿನ ಯಶಸ್ಸು ಪಡೆಯಲು ಸಾಧ್ಯವಾಗುತ್ತದೆ. ಇದರಿಂದ ನಿಮಗೆ ಸಂತುಷ್ಟವಾಗುತ್ತದೆ. ಇನ್ನು ನಿಮ್ಮ ಸಹೋದ್ಯೋಗಿಗಳ ಜೊತೆ ಇರುವ ಭಿನ್ನಾಭಿಪ್ರಾಯಗಳನ್ನು ಮರೆಯಲು ಪ್ರಯತ್ನ ಮಾಡುತ್ತೀರಿ. ಶುಭದಿನ **12**. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಈ ವಾರದ ಮೊದಲಾರ್ಧದಲ್ಲಿ ಗ್ರಹಗತಿಗಳು ನಿಮಗೆ ಅನುಕೂಲಕರವಾಗಿವೆ. ಈ ಅವಧಿಯಲ್ಲಿ ಅತಿ ಮುಖ್ಯವಾದ ಕೆಲಸಗಳನ್ನು ಮಾಡಿಕೊಂಡು ಬಿಡಿ. ಯಾವುದೇ ವ್ಯವಹಾರ, ಕೆಲಸಗಳಲ್ಲಿ ಯಶಸ್ಸು ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ಗೌರವ, ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಸಹೋದ್ಯೋಗಿಗಳ ಜೊತೆ ಬಾಂಧವ್ಯ ಗಟ್ಟಿ ಆಗಲಿದೆ. ಶುಭದಿನ **14**. ಲಕ್ಷ್ಮೀನಾರಾಯಣ ಹೃದಯ ಪಾರಾಯಣ ಮಾಡಿರಿ.




ಆರೋಗ್ಯ ಸುಧಾರಿಸುವುದು. ಆಸ್ತಿ ಖರೀದಿ ಬಗ್ಗೆ ಚಿಂತನೆ. ಕಲಾವಿದರಿಗೆ ಸಾಹಿತಿಗಳಿಗೆ ಉತ್ತಮ ವಾರ. ಸಂಘ ಸಂಸ್ಥೆಗಳಿಂದ ಧನಲಾಭ. ಶತ್ರುಗಳು ಹಿಂದೆ ಸರಿಯುವರು. ವೃತ್ತಿ ವ್ಯವಹಾರದಲ್ಲಿ ಲಾಭ, ವ್ಯಾವಹಾರಿಕ ಅನುಕೂಲತೆ. ಸರಕಾರಿ ಕೆಲಸ ಶೀಘ್ರ ಆಗುವುದು. ತಂದೆ ತಾಯಿಯವರ ಆರೋಗ್ಯ ಸುಧಾರಣೆ, ಮಾನ, ಸನ್ಮಾನ ದೊರೆಯುವುದು. ಶುಭದಿನ **16**. ಚಂಡಿ ಪಾರಾಯಣ ಮಾಡಿರಿ.




ನವೋಲ್ಲಾಸ ಬರುವುದು. ಧರ್ಮ ದಾನಕ್ಕಾಗಿ ಖರ್ಚು. ಮಿತ್ರರಿಗೆ ಸಹಾಯ. ವ್ಯಾಪಾರದಲ್ಲಿ ಅಧಿಕ ಲಾಭ ಹಳೆಯ ಮಿತ್ರರ ಆಗಮನ. ಹಲವು ದಿನಗಳ ಹಣಕಾಸಿನ ಸಮಸ್ಯೆ ಬಗೆಹರಿಯುವುದು. ಬರತಕ್ಕ ಬಾಕಿ ಹಣ ಬರುವುದು. ಹೊಟ್ಟೆನೋವು ಕಾಣಿಸಬಹುದು. ಮನೆಯಲ್ಲಿ ಸಂಭ್ರಮ. ಮಕ್ಕಳಿಂದ ಶುಭವಾರ್ತೆ. ಮಹತ್ವದ ಕಾಗದ ಪತ್ರಗಳ ರಕ್ಷಣೆ. ಸಹೋದರರ ಸಹಾಯ. ಶುಭದಿನ **15**. ಶಿವ ಕವಚ ಓದಿರಿ.




ಕುಟುಂಬ ಸದಸ್ಯರ ಜೊತೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಕೆಲಸಗಳನ್ನು ತುಂಬ ಶ್ರದ್ಧೆಯಿಂದ ಮಾಡುತ್ತೀರಿ. ಈ ಹಿಂದೆಂದಿಗಿಂತಲೂ ಈ ವಾರ ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ಆದರೆ ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ಶುಭದಿನ **13**. ಸೌಂದರ್ಯಲಹರಿ ಪಠಿಸಿರಿ.




ಎಂಜಿನಿಯರ್ ಕ್ಷೇತ್ರದವರಿಗೆ ಅವಕಾಶಗಳು ಹುಡುಕಿಕೊಂಡು ಬರುತ್ತವೆ. ನಿಮ್ಮ ತಾಂತ್ರಿಕ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಸಾಧ್ಯವಾಗುತ್ತದೆ. ಕುಟುಂಬದೊಳಗೆ ಸಂತಸದ ವಾತಾವರಣ ಇರುತ್ತದೆ. ಗಳಿಕೆ ಮತ್ತಷ್ಟು ಹೆಚ್ಚಾಗಲಿದೆ. ನಿಮ್ಮ ಹಣದ ಮೂಲವನ್ನು ಸರಿಯಾದ ದಾರಿಯಲ್ಲಿ ವಿತರಿಸಲು ಯಶಸ್ಸು ಸಾಧಿಸುತ್ತೀರಿ. ಕಿರಿಯರಿಗೆ ಅಗತ್ಯ ಮಾರ್ಗದರ್ಶನ ನೀಡಲಿದ್ದೀರಿ. ಶುಭದಿನ **15**. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಸೇವಾ ವಲಯದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರತಿಭೆಯನ್ನು ಪ್ರದರ್ಶಿಸಲು ಹಾಗೂ ಬಡ್ತಿ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ಶೈಕ್ಷಣಿಕ ಅರ್ಹತೆ ಹೆಚ್ಚಿಸಿಕೊಳ್ಳಲು ಪ್ರಯತ್ನಿಸುತ್ತೀರಿ. ಕಾನೂನು ವ್ಯಾಜ್ಯಗಳಲ್ಲಿ ಸರಿಸಮವಾದ ಹೋರಾಟ ಮಾಡುತ್ತೀರಿ. ಶುಭದಿನ **16**. ದೇವ್ಯಪರಾದ ಕ್ಷಮಾಪನಾ ಸ್ತೋತ್ರ ಪಠಿಸಿರಿ.




ಖರ್ಚುಗಳು ಹೆಚ್ಚಾಗಿ ಆದಾಯದಲ್ಲಿ ಇಳಿಕೆಯಾಗುತ್ತದೆ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವಾರದ ಮಧ್ಯ ಭಾಗದಲ್ಲಿ ವ್ಯಾಪಾರ ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ವೈಯಕ್ತಿಕ ಸಂಬಂಧಗಳು ಉತ್ತಮವಾಗಿರುತ್ತದೆ. ಶುಭದಿನ **15**. ಶ್ರೀ ದುರ್ಗಾಪಾರಾಯಣ ಮಾಡಿರಿ.




ಆಸ್ತಿ ಖರೀದಿಗೆ ಪ್ರಯತ್ನಿಸುತ್ತಿರುವವರು ಆ ಬಗ್ಗೆ ಪರಿಶೀಲನೆ ನಡೆಸಲಿದ್ದೀರಿ. ವಾರದ ಅಂತ್ಯಕ್ಕೆ ಸರಿಯುತ್ತಾ ಕುಟುಂಬದವರ ಬೆಂಬಲ ದೊರೆಯಲಿದೆ. ಸೋದರ ಸೋದರಿಯರ ಜೊತೆ ಬಾಂಧವ್ಯ ಗಟ್ಟಿಯಾಗುತ್ತದೆ. ಉನ್ನತ ಶಿಕ್ಷಣ ಪಡೆಯಬೇಕು ಎಂದುಕೊಂಡವರಿಗೆ ಅತ್ಯುತ್ತಮ ಪ್ರಗತಿ ಇದೆ. ಆರೋಗ್ಯ ಸಮಸ್ಯೆಗಳು ಕಾಡುತ್ತಿದ್ದಲ್ಲಿ ಸುಧಾರಣೆ ಆಗಲಿದೆ. ಶುಭದಿನ **14**. ಶ್ರೀ ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ವ್ಯಾಪಾರ ಉದ್ಯಮ ವಿಸ್ತರಣೆ ಬಗ್ಗೆ ಮುಖ್ಯವಾದ ತೀರ್ಮಾನವನ್ನು ಕೈಗೊಳ್ಳಲಿದ್ದೀರಿ. ಎಷ್ಟೇ ಚಟುವಟಿಕೆ, ಒತ್ತಡದ ಕೆಲಸ ಇದ್ದರೂ ಆರಾಮವಾಗಿ ಪೂರೈಸಲು ನಿಮ್ಮಿಂದ ಸಾಧ್ಯವಾಗಲಿದೆ. ವೈವಾಹಿಕ ಜೀವನ ಸಂತೋಷದಾಯಕವಾಗಿ ಇರುತ್ತದೆ. ಮುಖ್ಯವಾದ ಕೆಲಸ ಕಾರ್ಯ ಮುಂದೂಡಬೇಕಾದ ಸನ್ನಿವೇಶ ಎದುರಾಗುತ್ತದೆ. ಶುಭದಿನ **16**. ಕಾಲಭೈರವನ ಸೇವೆ ಮಾಡಿರಿ.




ವಾರದ ಶುರುವಿನಲ್ಲಿ ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಸಾಧ್ಯತೆಗಳಿವೆ. ಹಟಮಾರಿತನ ಒಳ್ಳೆಯದಲ್ಲ. ಶುಭದಿನ **17**. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಉನ್ನತ ಶಿಕ್ಷಣದ ಯತ್ನದಲ್ಲಿ ಯಶಸ್ಸು. ದೇವತಾ ಆರಾಧನೆಗೆ ಶ್ರಮ ಹಾಕುತ್ತೀರಿ. ಉದ್ಯೋಗ ಸ್ಥಳದಲ್ಲಿ ಭಾವನಾತ್ಮಕವಾಗಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಲಿದ್ದೀರಿ. ವೃತ್ತಿಪರ ಜೀವನದಲ್ಲಿ ಅತ್ಯುತ್ತಮವಾದ ಬೆಳವಣಿಗೆ ಇದೆ. ಆದಾಯ ಅನುಕೂಲಕರವಾಗಿ ಇರಲಿದೆ. ಹಣಕಾಸಿನ ಸಮಸ್ಯೆಗಳು ಕಾಡುತ್ತಿದ್ದಲ್ಲಿ ಪರಿಹಾರ ಮಾರ್ಗಗಳು ಗೋಚರಿಸುತ್ತವೆ. ಶುಭದಿನ **16**. ಕನಕಧಾರಾ ಸ್ತೋತ್ರ ಪಠಣ ಮಾಡಿರಿ.